**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಚಿದಾನಂದ ಗೌಡ, ರವರು ನಿಯಮ 72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯು ಸೂಚನೆಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಉತ್ತರ**

**ಪ್ರಶ್ನೆ**

ನಗರಗಳ ನೈರ್ಮಲ್ಯ ನಿರ್ವಹಣೆಯಲ್ಲಿ ಪೌರ ಕಾರ್ಮಿಕರ ಪಾತ್ರ ಬಹಳ ಪ್ರಮುಖವಾದದ್ದು, ನಮ್ಮ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ 10,000(ಹತ್ತುಸಾವಿರ) ಕ್ಕೂ ಹೆಚ್ಚು ಮಂದಿ ಗುತ್ತಿಗೆ ಆಧಾರದಲ್ಲಿ ಕಸಸಾಗಿಸುವ ವಾಹನ ಚಾಲಕರು, ಲೋಡರ್ಸ್, ಕ್ಲೀನರ್ಸ್, ಘನತ್ಯಾಜ್ಯ ವಿಲೇವಾರಿ ಘಟಕ ಕಾರ್ಮಿಕರು ಮತ್ತು ಕಾವಲುಗಾರರು ಉಳಿದ ಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 2017 ಮತ್ತು 2023ರ ನೇಮಕಾತಿಯ ಸಂದರ್ಭದಲ್ಲಿ ಕಸ ಗುಡಿಸುವ ಪೌರ ಕಾರ್ಮಿಕರಿಗೆ ಮಾತ್ರ ಗುತ್ತಿಗೆ ರದ್ದು ಪಡಿಸಿ ನೇಮಕಾತಿ ಗೊಳಿಸಲಾಯಿತು. ಆದರೆ ಪೌರ ಕಾರ್ಮಿಕರ ಜೊತೆಗೆ ಕರ್ತವ್ಯ ನಿರ್ವಹಿಸುತ್ತಿದ್ದ ಹೊರ ಗುತ್ತಿಗೆ ಕಾರ್ಮಿಕರನ್ನು ನೇರ ಪಾವತಿಗೂ ತರಲಿಲ್ಲ ಮತ್ತು ನೇಮಕಾತಿಗೂ ಪರಿಗಣಿಸಲಿಲ್ಲ.

2022ರಲ್ಲಿ ಅಂದಿನ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿಯವರು ಹೊರಗುತ್ತಿಗೆ ಪೌರ ಕಾರ್ಮಿಕರನ್ನು ನೇರಪಾವತಿಗೆ ತರಲು ತೀರ್ಮಾನ ಮಾಡಿದ್ದರೂ ಸಹ ಅಧಿಕಾರಿಗಳು ಅದನ್ನು ಜಾರಿಮಾಡಲು ನಿರ್ಲಕ್ಷ ತೋರುತ್ತಿದ್ದಾರೆ. ಪೌರ ಕಾರ್ಮಿಕರಿಗೆ ಏಜನ್ಸಿಗಳ ಮೂಲಕ ವೇತನ ಪಾವತಿಯಾಗುತ್ತಿದ್ದು ಅವರಿಂದ ಕಿರುಕುಳಕ್ಕೆ ಒಳಗಾಗಿದ್ದಾರೆ. ನಮ್ಮ ನಗರಗಳನ್ನು ಹಸನಾಗಿಡುವ ಪೌರ ಕಾರ್ಮಿಕರ ಜೀವನ ಅತಂತ್ರವಾಗಿದೆ. ಆದ್ದರಿಂದ ಇವರ ಜೀವನಕ್ಕೆ ಭದ್ರತೆ ಕಲ್ಪಿಸಲು, ಹೊರಗುತ್ತಿಗೆ ಏಜನ್ಸಿಗಳ ಕಿರುಕುಳ ತಪ್ಪಿಸಲು ಪೌರ ಕಾರ್ಮಿಕರನ್ನು ನೇರ ಪಾವತಿಗೆ ತರಬೇಕೆಂದು ಮಾನ್ಯ ಪೌರಾಡಳಿತ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ**

ವೃಂದ ಮತ್ತು ನೇಮಕಾತಿ ನಿಯಮಾವಳಿ 2010ರ ರೀತ್ಯ ನಗರಸಭೆಗಳಲ್ಲಿ ಶೇ.50%ರಷ್ಟು ಪೌರ ಕಾರ್ಮಿಕರನ್ನು ನೇರ ನೇಮಕಾತಿಯ ಮೂಲಕ ಹಾಗೂ ಶೇ.50% ರಷ್ಟು ಪೌರ ಕಾರ್ಮಿಕರನ್ನು ಹೊರ ಗುತ್ತಿಗೆಯ ಮೂಲಕ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಶೇ100%ರಷ್ಟನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ:ನಆಇ 126 ಟಿಎಂಎಸ್ 2016, ದಿನಾಂಕ:07.08.2017ರಂದು ಸ್ವಚ್ಛತಾ ಕಾರ್ಯವನ್ನು ಹೊರಗುತ್ತಿಗೆ ನೀಡುವುದನ್ನು ಸ್ಥಗಿತಗೊಳಿಸಿದೆ. ಹಾಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರನ್ನು ಅಗತ್ಯಗನುಗುಣವಾಗಿ ಅಂದರೆ 700 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿಕರಂತೆ (ಖಾಯಂ ಪೌರಕಾರ್ಮಿಕರನ್ನು ಸೇರಿ) ನೇಮಕಾತಿ ಮಾಡಿಕೊಳ್ಳಲು ಆದೇಶಿಸಲಾಗಿರುತ್ತದೆ.

ಕರ್ನಾಟಕ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಲ್ಲಿನ ಪೌರಕಾರ್ಮಿಕರ ನೇಮಕಾತಿ (ವಿಶೇಷ) ನಿಯಮಗಳು 2017ರ ನಿಯಮಗಳನ್ನು ರಚಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 126 ಟಿಎಂಎಸ್ 2016 ದಿನಾಂಕ 04.12.2017ರಂದು ದಿನಗೂಲಿ, ಕ್ಷೇಮಾಭಿವೃದ್ಧಿ, ಗುತ್ತಿಗೆ/ಹೊರಗುತ್ತಿಗೆ/ಇತರೆ ಆಧಾರದ ಮೇಲೆ ಕನಿಷ್ಠ 2 ವರ್ಷ ಸೇವೆ ಸಲ್ಲಿಸಿರುವಂತಹ, ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕರ್ತವ್ಯ ನಿರ್ವಹಿಸುತ್ತಿರುವ ಕನ್ನಡ ಭಾಷೆ ಮಾತನಾಡಲು ತಿಳಿದಿರುವ ಅರ್ಹತೆಯನ್ನು ನಿಗಧಿಪಡಿಸಿ, ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲಾಗಿದೆ.

Scanned with OKEN

ದಿನಾಂಕ:23.11.2022ರ ಪೌರಕಾರ್ಮಿಕರ ನೇಮಕಾತಿ (ವಿಶೇಷ) ನಿಯಮಗಳು - 2022ರ ಅಧಿಸೂಚನೆಯ ರೀತ್ಯಾ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 176 ಜಿಇಎಲ್ 2022 (ಭಾಗ-2), ದಿನಾಂಕ: 23.11.2022ರಂದು ನೇರ ನೇಮಕಾತಿಗಾಗಿ ಖಾಲಿ ಇರುವ 5533 ಪೌರಕಾರ್ಮಿಕರ ಹುದ್ದೆಗಳಿಗೆ ವಯೋಮಿತಿಯನ್ನು 55 ವರ್ಷಗಳಿಗೆ ನಿಗಧಿಪಡಿಸಿ, ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ನೇರಪಾವತಿ, ಕ್ಷೇಮಾಭಿವೃದ್ಧಿ ಅಥವಾ ದಿನಗೂಲಿ ಅಥವಾ ಗುತ್ತಿಗೆ ಅಥವಾ ಸಮಾನ ಕೆಲಸಕ್ಕೆ ಸಮಾನ ವೇತನ ಅಥವಾ ಹೊರಗುತ್ತಿಗೆ ಅಥವಾ ಲೋಡರ್ ಅಥವಾ ಕ್ಲೀನರ್ ಆಧಾರದ ಮೇಲೆ ಕನಿಷ್ಠ 2 ವರ್ಷಗಳಿಗಿಂತ ಕಡಿಮೆಯಿಲ್ಲದ ಸೇವೆಯನ್ನು ಸಲ್ಲಿಸಿರುವ ಮತ್ತು ಈ ನಿಯಮಗಳ ಪ್ರಾರಂಭದ ದಿನಾಂಕದಿಂದಲೂ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಆದ್ಯತೆಯನ್ನು ನೀಡಿ 5533 ಹುದ್ದೆಗಳ ಪೈಕಿ 4126 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲಾಗಿರುತ್ತದೆ. ಬಾಕಿ ಇರುವ ಹುದ್ದೆಗಳ ಸಂಖ್ಯೆ1407.

ಮಾನ್ಯ ಮುಖ್ಯಮಂತ್ರಿಗಳು 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ - 278 ರಲ್ಲಿ ನೇರ ಪಾವತಿಯಡಿ ಕೆಲಸ ನಿರ್ವಹಿಸುತ್ತಿರುವ 24005 ಪೌರಕಾರ್ಮಿಕರನ್ನು ಖಾಯಂಗೊಳಿಸಲು ಸರ್ಕಾರದಿಂದ ಅನುಮೋದನೆ ನೀಡಲಾಗಿದೆ. ನೇರ ಪಾವತಿಯಡಿಯಲ್ಲಿ ಬಾಕಿ ಉಳಿದಿರುವ ಪೌರ ಕಾರ್ಮಿಕರಿಗೂ ಹಂತ ಹಂತವಾಗಿ ಖಾಯಂಗೊಳಿಸಲು ಕ್ರಮವಹಿಸಲಾಗುವುದು ಎಂದು ಘೋಷಿಸಿರುತ್ತಾರೆ. ಅದರಂತೆ ಆರ್ಥಿಕ ಇಲಾಖೆಯು ರಾಜ್ಯದ ನಗರ ಸ್ಥಳಿಯ ಸಂಸ್ಥೆಗಳು, 10 ಮಹಾನಗರ ಪಾಲಿಕೆಗಳು ಮತ್ತು ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಒಳಗೊಂಡಂತೆ ಒಟ್ಟು 2127 ನೇರಪಾವತಿಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಖಾಯಂಮಾತಿ ಮಾಡಲು ಅನುಮೋದನೆ ನೀಡಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 57 TMS 2024 (ಇ), ದಿನಾಂಕ: 27.09.2024 ರಲ್ಲಿ ಒಟ್ಟು 2127 ಹುದ್ದೆಗಳಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆಗೆ 700, ಮಹಾನಗರಪಾಲಿಕೆಗಳಿಗೆ-327 ಮತ್ತು ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ -1100 ಪೌರಕಾರ್ಮಿಕ ಹುದ್ದೆಗಳನ್ನು ಹಂಚಿಕೆ ಮಾಡಿದೆ. 1100 ಪೌರಕಾರ್ಮಿಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆವಾರು ಹಂಚಿಕೆ ಮಾಡಿ ಆಯಾ ಜಿಲ್ಲಾಧಿಕಾರಿಗಳ ಹಂತದಲ್ಲಿ ಕ್ರಮವಹಿಸುವ ಬಗ್ಗೆ ಪೌರಾಡಳಿತ ನಿರ್ದೇಶನಾಲಯದ ದಿನಾಂಕ:23.10.2024ರ ಆದೇಶದಲ್ಲಿ ಸೂಚಿಸಲಾಗಿದೆ.

ಲೋಡರ್ಸ್ ಮತ್ತು ಕ್ಲೀನರ್ಸ್‌ಗಳ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 150 ಟಿಎಂಎಸ್ 2017, ದಿನಾಂಕ: 04.02.2022 ರಲ್ಲಿ ಮತ್ತು ತಿದ್ದುಪಡಿ ಆದೇಶ ದಿನಾಂಕ: 19.02.2022 ರಂತೆ ಲೋಡರ್ಸ 1437 ಮತ್ತು ಕ್ಲೀನರ್ಸ್ - 309 ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿ, 301 ಲೋಡರ್ಸ್ ಗಳನ್ನು ನೇಮಕಾತಿ ಮಾಡಿಕೊಂಡು 1136 ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯಲ್ಲಿದ್ದು, 529 ಹುದ್ದೆಗಳು ಖಾಲಿಯಿರುತ್ತವೆ.

ಅದೇ ರೀತಿ ಕ್ಲೀನರ್ಸ್ ನೇಮಕಾತಿಗೆ ಸಂಬಂಧಿಸಿದಂತೆ 72 ಹುದ್ದೆಗಳನ್ನು ನೇಮಕಾತಿ ಮಾಡಿಕೊಂಡು 237 ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯಲ್ಲಿದ್ದು, 215 ಹುದ್ದೆಗಳು ಖಾಲಿಯಿರುತ್ತವೆ.

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಘನತ್ಯಾಜ್ಯ ವಸ್ತುಗಳ ನಿರ್ವಹಣೆಗಾಗಿ ಅವಶ್ಯಕತೆಯಿರುವ ವಾಹನ, ಯಂತ್ರೋಪಕರಣಗಳು ಮತ್ತು ಮಾನವ ಸಂಪನ್ಮೂಲಗಳ ಕುರಿತು DPR ಅನ್ನು ತಯಾರಿಸಿ ಸಕ್ಷಮ ಪ್ರಾಧಿಕಾರಗಳಿಂದ ಆಡಳಿತಾತ್ಮಕ & ತಾಂತ್ರಿಕ ಮಂಜೂರಾತಿಯನ್ನು ಪಡೆದು ವಾಹನಗಳನ್ನು ಖರೀದಿಸಿದ್ದು, ಖರೀದಿಸಿರುವ ಘನತ್ಯಾಜ್ಯ ವಾಹನಗಳಿಗೆ ಅವಶ್ಯಕತೆಯಿರುವ ಚಾಲಕರನ್ನು ಹೊರಗುತ್ತಿಗೆ ಮೂಲಕ ಪಡೆದು ಕೆಲಸ ನಿರ್ವಹಿಸಲಾಗುತ್ತಿದ್ದು ಸದರಿಯವರುಗಳಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನದನ್ವಯ ವೇತನ ಪಾವತಿಸಲಾಗುತ್ತಿದೆ.

ಘನತ್ಯಾಜ್ಯ ವಾಹನ ಚಾಲಕರನ್ನು (ಗ್ರೂಪ್ 'ಡಿ') ನೇರಪಾವತಿಗೆ ಒಳಪಡಿಸುವ ಸಂಬಂಧ ಆರ್ಥಿಕ ಇಲಾಖೆಯು ಹೊರಗುತ್ತಿಗೆ ನೌಕರರ ವೇತನವನ್ನು ಯಥಾಸ್ಥಿತಿ ಮುಂದುವರೆಸಲು ಮತ್ತು ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಂತೆ ವೇತನ ಪಾವತಿಸಲು ಕ್ರಮವಹಿಸುವಂತೆ ಸೂಚಿಸಿರುತ್ತದೆ. ಅದರಂತೆ, ಸದರಿ ವಾಹನ ಚಾಲಕರನ್ನು ಯಥಾಸ್ಥಿತಿ ಹೊರಗುತ್ತಿಗೆ ಆಧಾರದ ಮೇಲೆ ಮುಂದುವರೆಸಲು ಮತ್ತು ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಂತೆ ವೇತನ ಪಾವತಿಸಲು ಕ್ರಮವಹಿಸುವಂತೆ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಪೌರಾಡಳಿತ ನಿರ್ದೇಶನಾಲಯದ ದಿನಾಂಕ: 30.09.2024ರ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಪುನಃ ಘನತ್ಯಾಜ್ಯ ನಿರ್ವಹಣೆ ವಿಭಾಗದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ 2155 ತ್ಯಾಜ್ಯ ಸಾಗಿಸುವ ವಾಹನ ಚಾಲಕರುಗಳನ್ನು ನೇರ ಪಾವತಿಯಡಿ ಪರಿಗಣಿಸಿ ಆಯಾ ಸ್ಥಳೀಯ ಸಂಸ್ಥೆಗಳ ಸಂಪನ್ಮೂಲದಿಂದ ಕಾರ್ಮಿಕ ಇಲಾಖೆಯ ಕನಿಷ್ಟ ವೇತನ ಕಾಯ್ದೆಯಂತೆ ಸಂಭಾವನೆಯನ್ನು ನೇರವಾಗಿ ಪಾವತಿಸಲು ಅನುಮೋದನೆ ಕೋರಿರುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ನೀಡಿರುವ ಅಭಿಪ್ರಾಯದಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ರೀತಿಯ ಕಾರ್ಮಿಕರ ಗುಂಪುಗಳನ್ನು ಒಳಗೊಂಡ ಸಮಗ್ರ ಪ್ರಸ್ತಾವನೆಯನ್ನು ತಯಾರಿಸಿ 2025-26ನೇ ಸಾಲಿನ ಆಯ-ವ್ಯಯ ತಯಾರಿಕೆಯ ಸಮಯದಲ್ಲಿ ಸಲ್ಲಿಸುವಂತೆ ಸರ್ಕಾರದಿಂದ ನಿರ್ದೇಶಿಸಲಾಗಿದೆ.

ಸರ್ಕಾರದ ನಿರ್ದೇಶನದಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ರೀತಿಯ ಕಾರ್ಮಿಕರ ಗುಂಪುಗಳ ಮಾಹಿತಿಯನ್ನು ಪೌರಾಡಳಿತ ನಿರ್ದೇಶನಾಲಯದಿಂದ ಸಮಗ್ರ ಪ್ರಸ್ತಾವನೆಯನ್ನು 2025-26ನೇ ಸಾಲಿನ ಆಯ- ವ್ಯಯ ತಯಾರಿಕೆಯ ಸಮಯದಲ್ಲಿ ಅಳವಡಿಸಿಕೊಳ್ಳಲು ಪರಿಶೀಲಿಸಲಾಗುವುದು.

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು

Scanned with OKEN